# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ನಾನೇ ದೊಡ್ಡವನೆಂಬ ಅಹಂಕಾರ ಬೇಡವೇ ಬೇಡ.
ಸಹನೆ ತಾಳ್ಮೆ ಇರುವವರು ದೇವರಿದ್ದಂತೆ,
ಕೋಪ ತಾಪ ಇರುವವರು ಶತ್ರುಗಳಂತೆ,
ಯೋಗಭಾಗ್ಯವ ಪಡೆದವರು ಯೋಗಿಗಳಂತೆ,
ಪಾಪಕರ್ಮದಿ ತೊಡಗಿದವರು ಪಾಪಿಗಳಂತೆ,
ನ್ಯಾಯನೀತಿಯಲ್ಲಿ ಸಾಗುವವರು ಮನುಜರಂತೆ,
ಸತ್ಯಧರ್ಮದಲ್ಲಿ ನಡೆದು ಬಾಳುವವರು
ಭೂಮಿ ಪುತ್ರರಂತೆ, ಕಂಡರೂ ಎಲ್ಲವನ್ನು
ಅಲೆಯುವವನು ಭಗವಂತನೊಬ್ಬನೇ..
**ಭಗವಾನ್ ಶ್ರೀಕೃಷ್ಣ**



REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 13-09-2024 to 19-09-2024 ಬೆಲೆ: 7-00 ಸಂಪುಟ–4 ಸಂಚಿಕೆ–12 ಪುಟಗಳು–6









ಇತ್ತೀಚಿನ ದಿನಗಳಲ್ಲಿ ಜನರಲ್ಲಿ ನಾಯಿ ಬೆಕ್ಕುಗಳ ಮೇಲೆ ಅತಿಯಾದ ಪ್ರೀತಿಯನ್ನು ಕಾಣಬಹುದು. ಅದರಲ್ಲಿಯೂ ಬೀದಿ ನಾಯಿಗಳಿಗೆ ಆಹಾರ ಹಂಚುವವರು ಹೆಚ್ಚಾಗುತ್ತಿದ್ದಾರೆ. ನಗರದ ನೆಹರು ಮೈದಾನದಲ್ಲಿ ಕುಡಿದು ತೂರಾಡುವ ಸೋಂಬೇರಿಗಳಿಗೆ ಆಹಾರ ಹಂಚುವುದಕ್ಕಿಂತ ಬೀದಿ ನಾಯಿಗಳಿಗೆ ಆಹಾರ ಹಂಚುವುದು ತಪ್ಪು ಎನ್ನಲಾಗದು. ಆದರೆ ಇತ್ತೀಚಿನ ದಿನಗಳಲ್ಲಿ ಶೋಕಿಗೆ ನಾಲ್ಕು ದಿನ ನಾಯಿ ಬೆಕ್ಕುಗಳನ್ನು ಸಾಕಿ, ನಂತರ ಅದನ್ನು ಬೀದಿಗೆ ಬಿಡುವವರ ಸಂಖ್ಯೆಯೂ ಹೆಚ್ಚಾಗುತ್ತಿದ್ದು, ಇದರ ವಿರುದ್ಧ ಜನ ಜಾಗೃತರಾಗಬೇಕಾಗಿದೆ.

## ತುಳು ಲಿಪಿಗೆ ಯುನಿಕೋಡ್ ಶೀಘ್ರ ಆಗಲಿ –ಕತ್ತಲ್‌ಸಾರ್



ಮಂಗಳೂರು: ತುಳು ಭಾಷೆ ಅಧಿಕೃತ ರಾಜ್ಯ ಭಾಷೆಯಾಗಬೇಕಾದರೆ, ಸಂವಿಧಾನದ ಎಂಟನೇ ಪರಿಚ್ಛೇದಕ್ಕೆ ಸೇರಬೇಕಾದರೆ ತುಳು ಲಿಪಿಗೆ ಯುನಿಕೋಡ್ ಸಿಗುವುದೂ ಒಂದು ಮಾನದಂಡವಾಗಿ ಅಗತ್ಯವಾಗಿದೆ. ಈ ಕಾರ್ಯ ಶೀಘ್ರವಾಗಿ ಆಗಬೇಕು ಎಂದು ತುಳು ಸಾಹಿತ್ಯ ಅಕಾಡಮಿಯ ಮಾಜಿ ಅಧ್ಯಕ್ಷ ದಯಾನಂದ ಜಿ. ಕತ್ತಲ್‌ಸಾರ್ ಒತ್ತಾಯಿಸಿದ್ದಾರೆ. ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಸಕ್ತ ಯುನಿಕೋಡ್ ಅನುಮೋದನೆ ದೊರಕಿರುವುದು ತುಳು ತಿಗಳಾರಿ ಲಿಪಿಗೆ ಎಂದರು. ತುಳು ಲಿಪಿಗೂ ಇದಕ್ಕೂ ಶೇ.25 ವ್ಯತ್ಯಾಸವಿದೆ. ಕನ್ನಡ ಮತ್ತು ತೆಲುಗು **3ನೇ ಪುಟಕ್ಕೆ**

## ಪ್ರಾಣಿ ಹಿಂಸೆ ವಿರುದ್ಧ ಕಟುಕರು ಪ್ರತಿಭಟನೆ ಮಾಡಿದಂತೆ –ಸಿಎಮ್

ಬೆಂಗಳೂರು: ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ ಅವರು ಮೀಸಲಾತಿ ವಿರೋಧಿ ಹೇಳಿಕೆ ನೀಡಿದ್ದಾರೆ ಎಂದು ಸುಳ್ಳು ಆರೋಪ ಮಾಡಿ ಬಿಜೆಪಿ ನಡೆಸುತ್ತಿರುವ ಪ್ರತಿಭಟನೆ "ಪ್ರಾಣಿ ಹಿಂಸೆ ವಿರುದ್ಧ ಕಟುಕರು ಪ್ರತಿಭಟನೆ ಮಾಡಿದಂತೆ" ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿರುಗೇಟು ನೀಡಿದ್ದಾರೆ. ಈ ಕುರಿತು ಸಾಮಾಜಿ ಮಾಧ್ಯಮ 'ಎಕ್ಸ್'ನಲ್ಲಿ ಅವರು, ಮೀಸಲಾತಿಯನ್ನು ವಿರೋಧಿಸುತ್ತಾ ಬಂದವರಿಗೆ, ಸಂವಿಧಾನವನ್ನೇ ಬದಲಾಯಿಸಲು ಹೊರಟವರಿಗೆ ಇಂತಹ ಪ್ರತಿಭಟನೆ ಮಾಡುವ ಯಾವ ನೈತಿಕತೆ ಇದೆ ಎಂದು ಪ್ರಶ್ನಿಸಿದ್ದಾರೆ. ಮೀಸಲಾತಿ ವಿರೋಧವನ್ನು ರಕ್ತಗತವಾಗಿಸಿಕೊಂಡಿರುವ ಬಿಜೆಪಿ ನಾಯಕರಿಗೆ ರಾಹುಲ್‌ಗಾಂಧಿಯವರ ಹೇಳಿಕೆಯನ್ನು ಅರ್ಥಮಾಡಿಕೊಳ್ಳುವ ಜ್ಞಾನವಾಗಲಿ, ವ್ಯವಧಾನವಾಗಲಿ ಇಲ್ಲದಿರುವುದು ಆಶ್ಚರ್ಯವೇನಲ್ಲ. ವಿದ್ಯೆ, ಉದ್ಯೋಗ ಮತ್ತು ಅವಕಾಶಗಳಲ್ಲಿ ಸರ್ವರಿಗೂ **3ನೇಪುಟಕ್ಕೆ**



## ಸದಸ್ಯತ್ವ ಅಭಿಯಾನ ಕಿಡಿ: ಅಭಿಮಾನಿಗಳು ಸಿಡಿಮಿಡಿ

ಮಂಗಳೂರು. ಕಲೆಗೆ ಜೀವನ ಮುಡಿಪಾಗಿಟ್ಟ ಕಲಾವಿದನೊಬ್ಬರಿಗೆ ರಾಜಕೀಯದ ಕಲೆ, ಬರೆ ಎಳೆಯ ಹೊರಟ ಘಟನೆ ಕರಾವಳಿಯಲ್ಲಿ ಸಂಚಲನ ಮೂಡಿಸಿದೆ. ತುಳು ನಾಟಕರಂಗದಲ್ಲಿ ತನ್ನದೇ ಛಾಪು ಮೂಡಿಸಿ, ತುಳು ಚಿತ್ರರಂಗದಲ್ಲಿ ನಟನಾಗಿ, ಗಾಯಕನಾಗಿ, ಸಂಗೀತ ನಿರ್ದೇಶಕನಾಗಿ, ನಿರ್ದೇಶಕನಾಗಿ ದೇಶ ವಿದೇಶದಲ್ಲಿರುವ ತುಳುವರಿಗೆ ಅತೀ ಹತ್ತಿರವಾಗಿರುವ ಹೆಸರು ದೇವದಾಸ್ ಕಾಪಿಕಾಡ್. ವಿಶೇಷ ಎಂದರೆ ಕರಾವಳಿ ಭಾಗವನ್ನು ಕೋಮು ಸೂಕ್ಷ್ಮ ಪ್ರದೇಶ ಎಂದು **3ನೇ ಪುಟಕ್ಕೆ**








# ಪ್ರಾಣಿ ಹಿಂಸೆ ವಿರುದ್ಧ ಕಟುಕರು ಪ್ರತಿಭಟನೆ ಮಾಡಿದಂತೆ –ಸಿಎಮ್

ಒಂದನೇ ಪುಟದಿಂದ......

ಸಮಾನ ಪಾಲನ್ನು ನೀಡುವುದೇ ಮೀಸಲಾತಿಯ ಮೂಲ ಉದ್ದೇಶ. ಆ ಉದ್ದೇಶ ಸಾಧನೆಯಾದ ನಂತರ ಮೀಸಲಾತಿಯಾಕೆ ಬೇಕು? ಇದನ್ನುರಾಹುಲ್‌ಗಾಂಧಿಯವರು ಮಾತ್ರ ಅಲ್ಲ ನಾನೂ ಹೇಳುತ್ತೇನೆ. ಇದು ಹೇಗೆ ಮೀಸಲಾತಿ ವಿರೋಧಿ ಹೇಳಿಕೆ ಆಗುತ್ತದೆ?' ಎಂದು ಹೇಳಿದ್ದಾರೆ. ಸಮಾನ ಅವಕಾಶ ಸಿಕ್ಕಿದೆಯೇ, ಇಲ್ಲವೇ ಎನ್ನುವುದನ್ನು ತಿಳಿದುಕೊಳ್ಳಲಿಕ್ಕಾಗಿಯೇ ಸುಪ್ರೀಂಕೋರ್ಟ್ ಜಾತಿ ಆಧಾರದಲ್ಲಿ ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆ ನಡೆಸಬೇಕೆಂದು ಹೇಳಿದ್ದು. ಅದನ್ನು ನಮ್ಮ ಸರ್ಕಾರ ಕರ್ನಾಟಕದಲ್ಲಿ ಮಾಡಿ ತೋರಿಸಿದೆ. ರಾಜ್ಯದ ಬಿಜೆಪಿ ನಾಯಕರಿಗೆ ಮತ್ತು ಕೇಂದ್ರದಲ್ಲಿರುವ ಅವರ ಸರ್ಕಾರಕ್ಕೆ ಸಾಮಾಜಿಕ ನ್ಯಾಯದ ಬಗ್ಗೆ ಅಷ್ಟೊಂದು ಕಾಳಜಿ ಇದ್ದರೆ ಮೊದಲು ಜಾತಿಗಣತಿಯನ್ನು ಶೀಘ್ರವಾಗಿ ದೇಶಾದ್ಯಂತ ನಡೆಸಿ ಮುಗಿಸಲಿ. ಮೀಸಲಾತಿ ಸಮಾಜದ ಕಟ್ಟಕಡೆಯ ಮನುಷ್ಯನನ್ನು ತಲುಪಿದೆಯೇ ಇಲ್ಲವೇ ಎನ್ನುವುದನ್ನು ತಿಳಿದುಕೊಳ್ಳಲು ಇದು ಅವಶ್ಯಕವಾಗಿದೆ' ಎಂದು ಅವರು ಹೇಳಿದ್ದಾರೆ.

# ತುಳು ಲಿಪಿಗೆ ಯುನಿಕೋಡ್ ಶೀಘ್ರ ಆಗಲಿ–ಕತ್ತಲ್‌ಸಾರ್

ಒಂದನೇ ಪುಟದಿಂದ......

ಲಿಪಿಗಳಿಗೆ ಸಾಮ್ಯತೆಗಳಿರುವಂತೆ ಈ ಎರಡು ಲಿಪಿಗಳಿಗೂ ಸಾಮ್ಯತೆಗಳಿವೆ. ಯು.ಬಿ.ಪವನಜ ಯುನಿಕೋಡಿಗೆ ಕೇವಲ ಪ್ರಸ್ತಾವವನ್ನು ಮಾತ್ರ ಕಳುಹಿಸಿರುತ್ತಾರೆ. ಯಾವುದೇ ಕಾರ್ಯವನ್ನು ಮಾಡಿರುವುದಿಲ್ಲ. 2017ರಲ್ಲಿ ಅಂದಿನ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪರ ಇ ಗರ್ವನನ್ಸ್ ಕಾರ್ಯದರ್ಶಿಯಾಗಿದ್ದ ಬೇಲೂರು ಸುದರ್ಶನ ಸಹಕಾರವನ್ನು ಪಡೆದು ತುಳು ಲಿಪಿ ರಾಜ್ಯ ಮತ್ತು ರಾಷ್ಟ್ರಮಾನ್ಯತೆ ಪಡೆಯುವಲ್ಲಿ ಕರ್ನಾಟಕ ತುಳು ಸಾಹಿತ್ಯ ಅಕಾಡಮಿಯ ಆಗ ಅಧ್ಯಕ್ಷನಾಗಿದ್ದ ನಾನು ಹಾಗೂ ರಿಜಿಸ್ಟ್ರಾರ್, ಸರ್ವ ಸದಸ್ಯರ ಪರಿಪೂರ್ಣ ಬೆಂಬಲದಿಂದ ಡಾ.ಅಕಾಶ್‌ರಾಜ್ ಜೈನ್ ಸತತ ಪರಿಶ್ರಮದಲ್ಲಿ, ಜೈ ತುಳುನಾಡು ಸಂಘಟನೆಯ ಯುವಕರ ಸಹಕಾರದಿಂದ, ಯೂನಿಕೋಡ್ ಕಾರ್ಯವನ್ನು ಮುಂದುವರಿಸಲಾಯಿತು. ಈ ಹಿಂದಿನ ಅಧ್ಯಕ್ಷರಾಗಿದ್ದ ಪ್ರೊ.ವಿವೇಕ ರೈಯವರಿಂದ ಹಿಡಿದು ನಮ್ಮ ಸಮಿತಿಯವರವರೆಗೆ ನಿರಂತರ ಪ್ರಯತ್ನದ ಫಲ ಹೊರತಾಗಿ ಇನ್ನುಳಿದವರದ್ದಲ್ಲ. ಪ್ರಸಕ್ತ ತುಳು ಲಿಪಿ ಯೂನಿಕೋಡ್ ಸೇರ್ಪಡೆಕಾರ್ಯ ಸಂಪೂರ್ಣಗೊಳ್ಳಲು ಇನ್ನೂ ಸ್ವಲ್ಪ ಕೆಲಸ ಬಾಕಿ ಇದೆ. ಅದಕ್ಕೆ ಈಗಿನ ಅಕಾಡಮಿಅಧ್ಯಕ್ಷರು ಹಾಗೂ ಸದಸ್ಯರು ಪ್ರಯತ್ನಿಸಬೇಕು ಎಂದು ಅವರು ಹೇಳಿದರು.

# ಸದಸ್ಯತ್ವ ಅಭಿಯಾದ ಕಿಡಿ: ಅಭಿಮಾನಿಗಳು ಸಿಡಿ ಮಿಡಿ

ಒಂದನೇ ಪುಟದಿಂದ......

ಬೊಬ್ಬಿಡುವವರ ಮುಂದೆ ತುಳು ನಾಡಿನ ಕಲಾವಿದರಿಗೆ ಜಾತಿಧರ್ಮದ ಹಂಗಿಲ್ಲದೆ ಅಭಿಮಾನಿಗಳಿರುವುದು ಸಾಮಾನ್ಯ. ಹಾಗಾಗಿ ಇಲ್ಲಿನ ಕಲಾವಿದರು ರಾಜಕೀಯದಲ್ಲಿ ಗುರುತಿಸಿಕೊಂಡಿರುವುದು ಬಹಳ ಕಡಿಮೆ. ಆದರೆ ಭಾರತೀಯ ಜನತಾ ಪಕ್ಷದ ಸದಸ್ಯತ್ವ ಅಭಿಯಾನದಲ್ಲಿ ವಿ ಐ ಪಿಗಳನ್ನು ಟಾರ್ಗೆಟ್ ಮಾಡಿದ್ದ ಕರಾವಳಿಯ ರಾಜ್ಯ ನಾಯಕರುಗಳು ಕಾಪಿಕಾಡ್ ಮನೆಗೆ ಬಂದಾಗ ಪ್ರೀತಿ ಪೂರ್ವಕ ಸ್ವಾಗತಕೋರಿದ್ದ ಕುಟುಂಬಕ್ಕೆ ಬಿಸಿ ತಟ್ಟಲು ಬಹಳ ಹೊತ್ತು ಬೇಕಾಗಿರಲಿಲ್ಲ. ಯಾವಾಗ ದೇವದಾಸ್ ಕಾಪಿಕಾಡ್ ಬಿಜೆಪಿಗೆ ಸೇರ್ಪಡೆ ಆಗಿದ್ದಾರೆ ಎನ್ನುವ ಪೋಸ್ಟನ್ನು ಸದಾನಂದ ಗೌಡರುತನ್ನ ಪೇಸ್ಬುಕ್‌ನಲ್ಲಿ ಹಂಚಿಕೊಂಡ ನ್ಯೂಸ್ ಹರಿದಾಡಿದ ತಕ್ಷಣ ಕಾಪಿಕಾಡ್ ತಾವು ಬಿಜೆಪಿ ಸದಸ್ಯತ್ವ ಪಡೆದಿಲ್ಲ ಎಂದು ಸ್ಪಷ್ಟನೆ ನೀಡಿದ್ದಾರೆ. ಅಷ್ಟರಲ್ಲಾಗಲೇ ವಿವಾದ ಸೃಷ್ಟಿಯಾಗಿದ್ದು, ಸೌದಿ ಅರೇಬಿಯಾದಲ್ಲಿ ನಡೆಯಲಿರುವ ಅವರ 'ದಿ ಕಾಪಿಕಾಡ್ ಶೋ'ಗೆ ಬಹಿಷ್ಕಾರ ಹಾಕುವ ಬೆದರಿಕೆಯ ಪೋಸ್ಟ್‌ಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿತ್ತು. ಇದರ ನಡುವೆ ದೇವದಾಸ್ ಮನೆಗೆ ಭೇಟಿ ನೀಡಿದ್ದು ನಿಜ, ಹಾಗೆಂದ ಮಾತ್ರಕ್ಕೆ ಅವರು ಪಕ್ಷದ ಚಟುವಟಿಕೆಯಲ್ಲಿ ತೊಡಗಿಕೊಳ್ಳುತ್ತಾರೆ ಎಂದರ್ಥವಲ್ಲ' ಎಂದು ಬಿಜೆಪಿ ಜಿಲ್ಲಾಘಟಕದ ಅಧ್ಯಕ್ಷ ಸತೀಶ್ ಕುಂಪಲ ಪ್ರತಿಕ್ರಿಯಿಸಿದ್ದಾರೆ. ಇಲ್ಲಿ ರಾಜಕಾರಣಿಗಳಿಗೆ ತಾವಿಟ್ಟುಕೊಂಡಿರುವ ಟಾರ್ಗೆಟ್ ಮುಗಿಸುವ ದಾವಂತದಲ್ಲಿ ಬೇರೆಯವರ ಮನೆಗೆ ಬೆಂಕಿ ಬೀಳದಂತೆ ನೋಡಿಕೊಳ್ಳಬೇಕಾಗಿತ್ತು. ಬಿಜೆಪಿ ನಾಯಕರು ಹೊತ್ತಿಸಿದ ಕಿಡಿಅಲ್ಲಿಗೇ ಶಮನವಾದರೆ ಉತ್ತಮ ಎನ್ನುವುದು ಕಾಪಿಕಾಡ್ ಅಭಿಮಾನಿಗಳ ಆಶಯ.

# ಅರೆಕಾಲಿಕ ಶಿಕ್ಷಕರ ಹುದ್ದೆ : ಅರ್ಜಿ ಆಹ್ವಾನ

ಮಂಗಳೂರು – ನಗರದ ಬೊಂದೆಲ್‌ನಲ್ಲಿರುವ ಸರ್ಕಾರಿ ಬಾಲಕರ ಬಾಲಮಂದಿರ ಇಲ್ಲಿಗೆ ಅರೆಕಾಲಿಕ ಶಿಕ್ಷಕರ ಹುದ್ದೆ ಭರ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಸೆಪ್ಟೆಂಬರ್ 20 ರೊಳಗೆ ಖುದ್ದಾಗಿ ಸರ್ಕಾರಿ ಬಾಲಕರ ಬಾಲ ಮಂದಿರ ಬೋಂದೆಲ್ ಇಲ್ಲಿಗೆ ಅರ್ಜಿಯನ್ನು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ 0824-2485401 ಸಂಪರ್ಕಿಸುವಂತೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಸಲ್ಲಿಸಲು ರೋಗಿಗಳಿಗೆ ಸೂಚನೆ

ಮಂಗಳೂರು – ನಗರ ಸಮುದಾಯ ಆರೋಗ್ಯ ಕೇಂದ್ರ ಉಳ್ಳಾಲದಲ್ಲಿ ಶೀಘ್ರದಲ್ಲಿ ಹೊಸ ಡಯಾಲಿಸಿಸ್ ಚಿಕಿತ್ಸಾ ಕೇಂದ್ರ ಆರಂಭವಾಗುತ್ತಿರುವ ಹಿನ್ನೆಲೆಯಲ್ಲಿ ಕೇಂದ್ರದ ವ್ಯಾಪ್ತಿಗೆ ಬರುವ ಡಯಾಲಿಸಿಸ್ ರೋಗಿಗಳು ನಗರ ಸಮುದಾಯ ಆರೋಗ್ಯ ಕೇಂದ್ರ ಉಳ್ಳಾಲ ಇಲ್ಲಿ ಅರ್ಜಿ ಸಲ್ಲಿಸುವಂತೆ ಸೂಚಿಸಲಾಗಿದೆ. 5ಕಿ. ಮೀ ವ್ಯಾಪ್ತಿಯಲ್ಲಿನ ಡಯಾಲಿಸಿಸ್ ರೋಗಿಗಳನ್ನು ಪರಿಗಣಿಸಲಾಗುತ್ತದೆ. ಹೆಚ್ಚಿನ ಮಾಹಿತಿಗೆ ಆಡಳಿತ ವೈದ್ಯಾಧಿಕಾರಿ ನಗರ ಸಮುದಾಯ ಆರೋಗ್ಯ ಕೇಂದ್ರ ಉಳ್ಳಾಲ ಭೇಟಿ ನೀಡುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂಗನವಾಡಿ ಹುದ್ದೆಗಳಿಗೆ ಅರ್ಜಿ ಆಹ್ವಾನ

ಮಂಗಳೂರು–ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ ಮಂಗಳೂರು (ನಗರ) ವ್ಯಾಪ್ತಿಯ 7 ಅಂಗನವಾಡಿ ಕೇಂದ್ರಗಳಿಗೆ ಕಾರ್ಯಕರ್ತೆ ಹಾಗೂ 38 ಅಂಗನವಾಡಿ ಕೇಂದ್ರಗಳ ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಆನ್‌ಲೈನ್ ವೆಬ್‌ಸೈಟ್ ವಿಳಾಸ: https://karnemakaone.kar.nic.in/abcd/ ಮೂಲಕ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 26 ಕೊನೆಯ ದಿನ.

# ವಿವಿಧ ನಿಗಮಗಳಿಂದ ಅರ್ಜಿ ಆಹ್ವಾನ

ಶಿವಮೊಗ್ಗ : ವಿವಿಧ ಜಿಲ್ಲಾ ಅಭಿವೃದ್ಧಿ ನಿಗಮಗಳ ವತಿಯಿಂದ 2024-25 ನೇ ಸಾಲಿನಲ್ಲಿ ನೇರಸಾಲ ಸೌಲಭ್ಯ ನೀಡಲು ಅರ್ಜಿ ಆಹ್ವಾನಿಲಾಗಿದೆ. ಆಸಕ್ತ ಫಲಾಪೇಕ್ಷಿಗಳು ವೆಬ್‌ಸೈಟ್ https://sevasindhu.karnataka.gov.in ರ ಮೂಲಕ ಅಕ್ಟೋಬರ್ 10ರೊಳಗೆ ಅರ್ಜಿಗಳನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ.: 08182-224349 ನ್ನು ಸಂಪರ್ಕಿಸಬಹುದೆಂದು ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತೋಟಗಾರಿಕೆ ನರ್ಸರಿ ಕೋರ್ಸ್‌ಗಾಗಿ ಅರ್ಜಿ ಆಹ್ವಾನ

ಶಿವಮೊಗ್ಗ : ಶಿವಮೊಗ್ಗ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯವು ಸೆಪ್ಟೆಂಬರ್ 30ರಿಂದ ತೋಟಗಾರಿಕೆಯಲ್ಲಿ ನರ್ಸರಿ ಬಗ್ಗೆ ಮೂರು ತಿಂಗಳುಗಳ ಸರ್ಟಿಫಿಕೇಟ್ ಕೋರ್ಸ್ ನಡೆಸಲು ಉದ್ದೇಶಿಸಿದ್ದು, ಅರ್ಹ ಆಸಕ್ತ ರೈತರಿಂದ ಅರ್ಜಿ ಆಹ್ವಾನಿಸಿದೆ. ಆಸಕ್ತ ರು ಸೆಪ್ಟೆಂಬರ್ 23ರೊಳಗಾಗಿ ಅರ್ಜಿ ಸಲ್ಲಿಸುವಂತೆ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ. ಹೆಚ್ಚಿನ ಮಾಹಿತಿಗಾಗಿ ವಿಜ್ಞಾನಿಗಳಾದ ಡಾ. ಬಿ.ವಿ ಚಂಪ- 7338582371, ಡಾ. ಭರತ್ ಕುಮಾರ್ ಎಂ.ವಿ.-8277206549 ಮತ್ತು ಡಾ. ರವಿಶಂಕರ್ ಎಂ.ಪಾಟೀಲ್-9916426892 ಇವರುಗಳನ್ನು ಸಂಪರ್ಕಿಸುವುದು.

# ಸಹಾಯಧನಕ್ಕೆ ಅರ್ಜಿ ಆಹ್ವಾನ

ಮಡಿಕೇರಿ – 2024-25ನೇ ಸಾಲಿನ ಪರಿಶಿಷ್ಟ ಜಾತಿ ಉಪ ಯೋಜನೆಯಡಿ ರಾಷ್ಟ್ರೀಯ ಮತ್ತು ಅಂತರ್ ರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದ ಪರಿಶಿಷ್ಟ ಜಾತಿ ಕ್ರೀಡಾಪಟುಗಳಿಗೆ ಸ್ವಯಂ ಉದ್ಯೋಗ ಹೊಂದಲು ಜಿಮ್ ಸ್ಥಾಪನೆಗಾಗಿ ಸರ್ಕಾರದ ಸಹಾಯಧನಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08272-228985 ರಲ್ಲಿ ಕಚೇರಿ ವೇಳೆ ಸಂಪರ್ಕಿಸಲು ಕೋರಿದೆ.

# ಕ್ರೀಡಾಪಟುಗಳಿಂದ ಅರ್ಜಿ ಆಹ್ವಾನ

ಮಡಿಕೇರಿ – ಪ್ರಸಕ್ತ (2024-25) ಸಾಲಿನ ಪರಿಶಿಷ್ಟ ಜಾತಿ ಉಪಯೋಜನೆ ಅಡಿಯಲ್ಲಿ ಪರಿಶಿಷ್ಟ ಜಾತಿ ಯುವಕ, ಯುವತಿಯರಿಗೆ ಜಿಮ್ ಫಿಟ್ನೆಸ್, ಬ್ಯೂಟಿಷಿಯನ್, ಚಾಟ್ಸ್ ತಯಾರಿಕೆ ತರಬೇತಿ ಶಿಬಿರಗಳನ್ನು ಇಲಾಖೆ ವತಿಯಿಂದ ಆಯೋಜಿಸಲಾಗಿದೆ. ಅರ್ಜಿ ನಮೂನೆಗಳನ್ನು ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜನರಲ್ ತಿಮ್ಮಯ್ಯ ಜಿಲ್ಲಾ ಕ್ರೀಡಾಂಗಣ, ಮಡಿಕೇರಿಯಲ್ಲಿ ಪಡೆದು ಸೆಪ್ಟೆಂಬರ್, 17 ರೊಳಗೆ ಕಚೇರಿಗೆ ಸಲ್ಲಿಸುವುದು. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ 08272-220986 ಮತ್ತು ತರಬೇತುದಾರರು 9980887499ನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿ.ಟಿ.ವಿಸ್ಮಯಿ ಅವರು ತಿಳಿಸಿದ್ದಾರೆ.

# ಟ್ಯಾಂಕರ್ ಚಾಲಕರಿಂದ ಪ್ರತಿಭಟನೆ



ಪಣಂಬೂರು: ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಪೆಟ್ರೋಲ್ ಸಾಗಾಟದ ಟ್ಯಾಂಕರ್ ಲಾರಿ ಚಾಲಕರು ಭಾರತ್ ಪೆಟ್ರೋಲಿಯಂ ಕಾರ್ಪೋರೇಶನ್ ಲಿಮಿಟೆಡ್ ಪೆಟ್ರೋಲ್ ಪ್ಲಾಂಟ್ ಬಳಿ ದಿಢೀರ್ ಪ್ರತಿಭಟನೆ ನಡೆಸಿದರು. ಟ್ಯಾಂಕ್ ಫೀಲಿಂಗ್‌ನ್ನು ಬೆ. 9ಗಂಟೆಯಿಂದ ಆರಂಭಿಸಿ ಸಂ. 6ಗಂಟೆಗೆ ಮುಕ್ತಾಯಗೊಳಿಸಬೇಕು. ತಿಂಗಳಿಗೆ ಆರು-ಏಳು ಸಾವಿರ ಕಿ.ಮೀ. ಟ್ರಿಪ್ ನೀಡಲಾಗುತ್ತಿತ್ತು. ಪ್ರಸ್ತುತ ಅದನ್ನು 2ಸಾವಿರ ಕಿ.ಮೀ. ನಿಗದಿ ಪಡಿಸಲಾಗಿದೆ. ಪ್ರತಿ ಕಿ.ಮೀ.ಗೆ ಕೇವಲ 6ರೂ. ನೀಡಲಾಗುತ್ತಿದ್ದು, ಇದರಿಂದ ಚಾಲಕರಿಗೆ ಸಂಬಳದ ತೊಂದರೆ ಉಂಟಾಗುತ್ತಿದೆ. ಮೊದಲಿನಂತೆ ಆರು-ಏಳು ಸಾವಿರ ಕಿ.ಮೀ. ಟ್ರಿಪ್ ನೀಡಬೇಕು. ಲಾರಿ ಚಾಲಕರಿಗೆ ತೊಂದರೆ ನೀಡುತ್ತಿರುವ ರಾಜ್ ಗಟ್ಟಿ ಎಂಬ ಪ್ಲಾನಿಂಗ್ ಅಧಿಕಾರಿಯನ್ನು ವರ್ಗಾಯಿಸಬೇಕು. ವರ್ಷದಲ್ಲಿ ಹಬ್ಬಕ್ಕೆ ಚಾಲಕರಿಗೆ 10 ರಜೆ ಇದ್ದು, ಆ ರಜೆಯನ್ನು ಚಾಲಕರಿಗೆ ಸರಿಯಾಗಿ ನೀಡಬೇಕು ಎಂದು ಬೇಡಿಕೆಗಳನ್ನು ಪ್ರತಿಭಟನಾನಿರತ ಟ್ಯಾಂಕರ್ ಚಾಲಕರು ಮುಂದಿಟ್ಟರು.

# ಶೈಕ್ಷಣಿಕ ಧನಸಹಾಯ ಬಿಡುಗಡೆಗೆ ಆಗ್ರಹಿಸಿ ಧರಣಿ




ಕುಂದಾಪುರ : ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಯು ಕಳೆದ ಮೂರು ವರ್ಷಗಳಿಂದ ಕಾರ್ಮಿಕರ ಮಕ್ಕಳ ಶೈಕ್ಷಣಿಕ ಧನಸಹಾಯ ಜಮೆ ಮಾಡದೇ ವಿಳಂಬ ಧೋರಣೆ ಅನುಸರಿಸುತ್ತಿದೆ ಎಂದು ಆರೋಪಿಸಿ ಕಾರ್ಮಿಕರ ಮಕ್ಕಳು ಇಂದು ರಾಜ್ಯ ಸರಕಾರದ ವಿರುದ್ಧ ಕುಂದಾಪುರ ಶಾಸಕರ ಕಚೇರಿ ಎದುರು ಪ್ರತಿಭಟನೆ ನಡೆಸಿದರು. ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಫೆಡರೇಷನ್ ಕರೆಯಂತೆ ಹಮ್ಮಿಕೊಳ್ಳಲಾದ ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಸಂಘದ ಅಧ್ಯಕ್ಷ ಸುರೇಶ್ ಕಲ್ಲಾಗರ, ಕುಂದಾಪುರ ವಿಧಾನಸಭಾ ಕ್ಷೇತ್ರದ ಕಟ್ಟಡ ಕಾರ್ಮಿಕರ ಮಕ್ಕಳ ಶೈಕ್ಷಣಿಕ ಧನಸಹಾಯ ಬಿಡುಗಡೆಗೆ ಶಾಸಕರು ಸರಕಾರದ ಮೇಲೆ ಒತ್ತಡ ತರಬೇಕು ಎಂದು ಆಗ್ರಹಿಸಿದರು.

# ಸರಕಾರಿ ಇಲಾಖೆಗಳ ನಾಮಫಲಕಗಳಲ್ಲಿ ಕನ್ನಡ ಕಡ್ಡಾಯ




ಉಡುಪಿ : ರಾಜ್ಯದಲ್ಲಿ ಕನ್ನಡವೇ ಆಡಳಿತ ಭಾಷೆಯಾಗಿದ್ದು, ಕನ್ನಡ ಭಾಷೆಯ ಸಮಗ್ರ ಅಭಿವೃದ್ಧಿಗಾಗಿ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ-2022 ಹಾಗೂ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ) ಅಧಿನಿಯಮ-2024 ಜಾರಿಗೆ ಬಂದಿದೆ. ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ 2022ರನ್ವಯ ಕನ್ನಡ ಭಾಷೆಯು ರಾಜ್ಯದ ಹಾಗೂ ಸ್ಥಳೀಯ ಪ್ರಾಧಿಕಾರದ ಅಧಿಕೃತ ಭಾಷೆಯಾಗಿದೆ. ಆದ್ದರಿಂದ ಸರಕಾರದ ಎಲ್ಲಾ ಇಲಾಖೆಗಳಲ್ಲಿ, ಇಲಾಖೆಗಳ ಅಧೀನದಲ್ಲಿ ಬರುವ ಎಲ್ಲಾ ಕ್ಷೇತ್ರ ಇಲಾಖೆಗಳಲ್ಲಿ, ಆಯುಕ್ತಾಲಯ, ನಿರ್ದೇಶನಾಲಯ, ನಿಗಮ, ಮಂಡಳಿ, ಪ್ರಾಧಿಕಾರಗಳ ಆವರಣಗಳಲ್ಲಿ ಹೆಸರು, ಪದನಾಮ, ಸೇವಾ ಅವಧಿಯ ನಾಮಫಲಕಗಳು, ಮಾರ್ಗಗಳ ಸೂಚನಾ ಫಲಕಗಳು, ಇನ್ನಿತರ ಯಾವುದೇ ನಾಮಫಲಕಗಳನ್ನು ಕಡ್ಡಾಯವಾಗಿ ಕನ್ನಡದಲ್ಲಿಯೇ ಪ್ರದರ್ಶಿಸಬೇಕು ಎಂದು ಜಿಲ್ಲಾಧಿಕಾರಿ ವಿದ್ಯಾಕುಮಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರವಾಸಿ ತಾಣಗಳ ಅಭಿವೃದ್ಧಿಗೆ ವೋಟ್




ಉಡುಪಿ : ಪ್ರವಾಸೋದ್ಯಮವನ್ನು ಮತ್ತಷ್ಟು ಮೇಲ್ದರ್ಜೆಗೇರಿಸಲು ಹಾಗೂ ಧಾರ್ಮಿಕ, ಸಾಂಸ್ಕೃತಿಕ, ಪಾರಂಪರಿಕ, ನೈಸರ್ಗಿಕ ಹಾಗೂ ವನ್ಯಜೀವಿ ಮತ್ತು ಸಾಹಸ ಚಟುವಟಿಕೆಗಳು ಹಾಗೂ ಇತರೆ ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರ ದೃಷ್ಟಿಕೋನದಲ್ಲಿ ಪ್ರಮುಖ ಪ್ರವಾಸಿ ತಾಣಗಳನ್ನು ಗುರುತಿಸಿ, ವಿಶ್ವ ದರ್ಜೆಯಲ್ಲಿ ಅಭಿವೃದ್ಧಿ ಪಡಿಸಲು ಕೇಂದ್ರ ಪ್ರವಾಸೋ ದ್ಯಮ ಸಚಿವಾಲಯದಿಂದ 'ದೇಖೋ ಅಪ್ನಾ ದೇಶ್, ಪೀಪಲ್ಸ್ ಚಾಯ್ಸ್-2024' ಎಂಬ ಕಾರ್ಯಕ್ರಮವನ್ನು ಪ್ರಾರಂಭಿಸಲಾಗಿದೆ. ಈ ಕಾರ್ಯಕ್ರಮದ ಭಾಗವಾಗಿ ನಾಗರಿಕರು ಹಾಗೂ ಪ್ರವಾಸಿಗರ ಆದ್ಯತೆಯ ಪ್ರವಾಸಿ ತಾಣಗಳನ್ನು ಆಯ್ಕೆ ಮಾಡಲು 'ಮೈ ಗವರ್ನ್' ವೇದಿಕೆಯಡಿ ಸೆಪ್ಟೆಂಬರ್ 15ರವರೆಗೆ ವೋಟ್ ಮಾಡುವ ಅವಕಾಶ ಕಲ್ಪಿಸಲಾಗಿದೆ. ವೋಟಿಂಗ್‌ನಲ್ಲಿ ಭಾಗವಹಿಸುವ ಪ್ರತಿಯೊಬ್ಬರಿಗೂ ಕೇಂದ್ರ ಸರಕಾರದಿಂದ ಅವರ ಹೆಸರಿನಲ್ಲಿ ಇ-ಪ್ರಮಾಣ ಪತ್ರ ದೊರೆಯಲಿದೆ ಎಂದು ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿಯ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ಡಾ.ಕೆ. ವಿದ್ಯಾಕುಮಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಮೆ ನಡಿಗೆಯಲ್ಲಿ ಚತುಷ್ಪಥ ರಸ್ತೆ ಕಾಮಗಾರಿ



ಕಾರ್ಕಳ: ರಾಷ್ಟ್ರೀಯ ಹೆದ್ದಾರಿ 169ರಲ್ಲಿ ಕಾರ್ಕಳ ಬೈಪಾಸ್ ರಸ್ತೆಯಿಂದ ಮಾಳ ಗೇಟ್ ವರೆಗಿನ ಚತುಷ್ಪಥ ರಸ್ತೆ ಕಾಮಗಾರಿ ಆಮೆ ನಡಿಗೆಯಲ್ಲಿ ಸಾಗಿದೆ. ಕಾಮಗಾರಿ ಸಂಪೂರ್ಣ ಕಳಪೆ ಗುಣಮಟ್ಟದಿಂದಾಗಿ ಸಾರ್ವಜನಿಕರು ತೊಂದರೆ ಅನುಭವಿಸುವಂತಾಗಿದೆ. 167 ಕೋಟಿ ರೂ. ವೆಚ್ಚದ ಕಾಮಗಾರಿ ಇದಾಗಿದ್ದು, ಎರಡು ವರ್ಷಗಳಿಂದ ನಿರಾತಂಕವಾಗಿ ಕಾಮಗಾರಿ ನಡೆಯುತ್ತಿದೆ. ಸಾರ್ವಜನಿಕ ರಸ್ತೆಗಳನ್ನು ಅಗಲೀಕರಣದ ನೆಪದಲ್ಲಿ ಅಗೆದು ಹಾಕಿದ್ದು, ವಾಹನ ಸವಾರರು ತಮ್ಮ ಮನೆಗಳಿಗೆ ಹೋಗಲು ಪರದಾಡುವ ಸ್ಥಿತಿ ನಿರ್ಮಾಣವಾಗಿದೆ. ಮಳೆಗಾಲದಲ್ಲಿ ರಸ್ತೆಯಲ್ಲಿ ಹರಿದು ಬರುವ ನೀರು ಮನೆಯಂಗಳಕ್ಕೆ ನುಗ್ಗಿ ತಗ್ಗು ಪ್ರದೇಶದ ಬಾವಿಗಳು, ಕೃಷಿ ಭೂಮಿಗಳು ನಾಶವಾಗುತ್ತಿದೆ. ರಸ್ತೆಗಿಂತ ಎತ್ತರಕ್ಕೆ ಕಾಂಕ್ರಿಟ್ ಚರಂಡಿ ನಿರ್ಮಾಣ ಕಾಮಗಾರಿ ನಡೆಯುತ್ತಿದೆ. ಅಂಗಡಿ ಮುಂಗಟ್ಟು ಮನೆಗಳಿಗೆ ವಾಹನ ಸಂಚಾರ ಅಸಾಧ್ಯವಾಗಿದ್ದು, ಸ್ಥಳೀಯರು ಪ್ರತಿಭಟನೆಗೆ ಮುಂದಾಗಿದ್ದಾರೆ.

# ಯಕ್ಷಗಾನ ವೇಷದಲ್ಲಿ ಭಿಕ್ಷಾಟನೆ ನಿಷೇಧಕ್ಕೆ ಮನವಿ



ಉಡುಪಿ: ಯಕ್ಷಗಾನದ ವೇಷಭೂಷಣಗಳನ್ನು ಧರಿಸಿಕೊಂಡು ರಸ್ತೆಯಲ್ಲಿ ಭಿಕ್ಷಾಟನೆ, ಮದ್ಯಪಾನ, ಧೂಮಪಾನ ಸೇವನೆ, ಅಸಹ್ಯಕರವಾಗಿ ಕುಣಿಯುವುದನ್ನು ತಕ್ಷಣವೇ ನಿಷೇಧಿಸಬೇಕು ಎಂದು ಉಡುಪಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯವರಿಗೆ ತಾವು ನಿಯೋಗದೊಂದಿಗೆ ತೆರಳಿ ಮನವಿ ಮಾಡಿದ್ದಾಗಿ ದ.ಕ.ಜಿಲ್ಲಾ ಬಿಜೆಪಿ ಸಾಂಸ್ಕೃತಿಕ ಪ್ರಕೋಷ್ಠದ ಸಂಚಾಲಕ ಸರಪಾಡಿ ಅಶೋಕ ಶೆಟ್ಟಿ ತಿಳಿಸಿದ್ದಾರೆ. ಉಡುಪಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಕರಾವಳಿಯ ಜನಸಾಮಾನ್ಯರ ಕಲೆಯಾದ ಯಕ್ಷಗಾನಕ್ಕೆ ಈ ಮೂಲಕ ಆಗುತ್ತಿರುವ ಅಪಚಾರ ತಕ್ಷಣ ನಿಲ್ಲಬೇಕಾಗಿದೆ ಎಂದ ಅವರು ಯಕ್ಷಗಾನಕ್ಕೆ ತನ್ನದೇ ಆದ ಹಿರಿಮೆ, ಗರಿಮೆ, ಸಾಂಸ್ಕೃತಿಕ ಹಾಗೂ ಧಾ ರ್ಮಿಕ ಹಿನ್ನೆಲೆಯಿದೆ. ಇದನ್ನು ಗೌರವಿಸ ಬೇಕಾಗಿದೆ ಎಂದರು.

# ಉಡುಪಿ ನಗರಸಭೆ : ತೆರಿಗೆ, ಕುಡಿಯುವ ನೀರಿನ ದರ ಇಳಿಕೆ



ಉಡುಪಿ: ಆಡಳಿತಾಧಿಕಾರಿಗಳ ಅವಧಿಯಲ್ಲಿ ಹೆಚ್ಚಳ ಮಾಡಲಾದ ಕುಡಿಯುವ ನೀರಿನ ದರ ಹಾಗೂ ತೆರಿಗೆಯನ್ನು ಕೂಡಲೇ ಪರಿಶೀಲಿಸಿ ಇಳಿಕೆ ಮಾಡುವ ಬಗ್ಗೆ ಇಂದು ನಡೆದ ಉಡುಪಿ ನಗರಸಭೆ ಸಾಮಾನ್ಯ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಯಿತು. ಉಡುಪಿ ನಗರಸಭೆ ಅಧ್ಯಕ್ಷ ಪ್ರಭಾಕರ ಪೂಜಾರಿ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ವಿಷಯ ಪ್ರಸ್ತಾಪಿಸಿದ ಸದಸ್ಯ ಸುಂದರ್ ಕಲ್ಮಾಡಿ ನಗರ ಸಭೆ ಕುಡಿಯುವ ನೀರಿನ ಬಿಲ್ ಹೆಚ್ಚಳದಿಂದ ಜನಸಾಮಾನ್ಯರಿಗೆ ಬಹಳಷ್ಟು ತೊಂದರೆ ಆಗಿದೆ. ಆದುದರಿಂದ ಕೂಡಲೇ ನೀರಿನ ದರವನ್ನು ಇಳಿಕೆ ಮಾಡಬೇಕು ಎಂದು ಆಗ್ರಹಿಸಿದರು. ಇದಕ್ಕೆ ಧ್ವನಿಗೂಡಿಸಿದ ಸದಸ್ಯೆ ಸುಮಿತ್ರಾಆರ್. ನಾಯಕ್, ತೆರಿಗೆಯನ್ನು ಕೂಡ ಇಳಿಕೆ ಮಾಡಬೇಕು ಎಂದು ಒತ್ತಾಯಿಸಿದರು.

# ಫಲಾನುಭವಿಗಳ ಸಂಖ್ಯೆ ಹೆಚ್ಚಳಕ್ಕೆ ಪ್ರಯತ್ನಿಸಿ– ಕ್ಯಾ. ಚೌಟ



ಮಂಗಳೂರು: ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೇಂದ್ರ ಸರ್ಕಾರದ ಪಿಎಂಇಜಿಪಿ ಹಾಗೂ ಮುದ್ರಾ ಯೋಜನೆಯಡಿ ಗ್ರಾಮೀಣ ಭಾಗದವರಿಗೆ ವಿಶೇಷವಾಗಿ ಮಹಿಳೆಯರು ಹಾಗೂ ಪರಿಶಿಷ್ಟ ಜಾತಿ/ಪಂಗಡ ಮತ್ತು ಹಿಂದುಳಿದ ವರ್ಗದ ಹೆಚ್ಚಿನ ಫಲಾನುಭವಿಗಳನ್ನು ತಲುಪಲು ಬ್ಯಾಂಕ್‌ಗಳು ಉತ್ತೇಜನ ನೀಡಬೇಕೆಂದು ಸಂಸದ ಕ್ಯಾ. ಬ್ರಿಜೇಶ್ ಚೌಟ ಕರೆ ನೀಡಿದ್ದಾರೆ. ಕೇಂದ್ರ ಸರ್ಕಾರದ ವಿವಿಧ ಯೋಜನೆಗಳಡಿ ದೊರೆಯುವ ಸಾಲ-ಸೌಲಭ್ಯಗಳ ಬಗ್ಗೆ ಅರ್ಹ ಫಲಾನುಭವಿಗಳಿಗೆ ಸೂಕ್ತ ಮಾಹಿತಿ ನೀಡಿ ಅದರ ಅನುಕೂಲ ದೊರಕಿಸಿ ಕೊಡುವುದಕ್ಕೆ ಜಿಲ್ಲೆಯಲ್ಲಿರುವ ಸಂಬಂಧಪಟ್ಟ ಬ್ಯಾಂಕ್ ಅಧಿಕಾರಿಗಳು ಹೆಚ್ಚಿನ ಮುತುವರ್ಜಿ ವಹಿಸಬೇಕು ಎಂದರು. ಪಿಎಂ ಇಜಿಪಿ ಯೋಜನೆಗೆ ಫಲಾನುಭವಿಗಳ ಆಯ್ಕೆ ಹಾಗೂ ಆಯ್ಕೆಗೊಂಡ ಫಲಾನುಭವಿಗಳ ಸಹಾಯಧನ ವಿಚಾರವಾಗಿಯೂ ಜಿಲ್ಲಾ ಕೈಗಾರಿಕಾ ಕೇಂದ್ರದ ಅಧಿಕಾರಿಗಳು ಹಾಗೂ ಬ್ಯಾಂಕ್ ಅಧಿಕಾರಿಗಳೊಂದಿಗೆ ಸಂಸದರು ವಿಸ್ತೃತವಾಗಿ ಚರ್ಚಿಸಿದರು. ಕೃಷಿ ಕ್ಷೇತ್ರಕ್ಕೆ ಉತ್ತೇಜನ ನೀಡುವ ನಿಟ್ಟಿನಲ್ಲಿ ರೈತರಿಗೆ ಕೆಸಿಸಿ ಕಿಸಾನ್ ಕ್ರೆಡಿಟ್ ಕಾರ್ಡ್ ಸೌಲಭ್ಯ ಒದಗಿಸು ವುದಕ್ಕೆ ಬ್ಯಾಂಕ್ಗಳು ಆದ್ಯತೆ ನೀಡಬೇಕು ಎಂದು ಬ್ಯಾಂಕ್ ಅಧಿಕಾರಿಗಳಿಗೆ ಕ್ಯಾ. ಚೌಟ ಸೂಚಿಸಿದರು.

# ರೈತರ ಕಾರ್ಡ್‌ಗಳ ದುರುಪಯೋಗ : ಎಚ್ಚರ ವಹಿಸಲು ಕ್ಯಾಂಪ್ಕೋ ಮನವಿ

ಮಂಗಳೂರು: ಬರ್ಮಾದ ಅಡಿಕೆಯನ್ನು ಕರ್ನಾಟಕದಲ್ಲಿ ಸ್ಥಳೀಯ ಅಡಿಕೆಯೊಂದಿಗೆ ಬೆರೆಸಿ ಮಾರಾಟ ಮಾಡುತ್ತಿರುವ ಪ್ರಕರಣ ಬೆಳಕಿಗೆ ಬಂದಿದೆ. ಬರ್ಮಾದ ಅಡಿಕೆ ಬೆಳೆಗಾರರೊಂದಿಗೆ ಒಳ್ಳೆಯ ಸಂಬಂಧ ಇರುವ ಕೆಲವು ವ್ಯಾಪಾರಿಗಳು ಅಲ್ಲಿಂದ ಕಳಪೆ ಗುಣಮಟ್ಟದ ಅಡಿಕೆಯನ್ನು ಆಮದು ಮಾಡಿಕೊಂಡು ಸ್ಥಳೀಯ ಅಡಿಕೆಯೊಂದಿಗೆ ಮಿಶ್ರಣ ಮಾಡಿ ಮಾರಾಟ ಮಾಡುತ್ತಿದ್ದ ಪ್ರಕರಣವನ್ನು ಕಾಂಪ್ಕೊ ಪತ್ತೆ ಹಚ್ಚಿದೆ. ಕ್ಯಾಂಪ್ಕೊದ ಸದಸ್ಯತ್ವದ ಚೀಟಿಯನ್ನು ಉಪಯೋಗಿಸಿಕೊಂಡು ರೈತರ ಸೋಗಿನಲ್ಲಿ ಕ್ಯಾಂಪ್ಕೊ ಶಾಖೆಗಳಿಗೆ ಬಂದು ಅಡಿಕೆ ಮಾರಾಟ ಮಾಡುತ್ತಿರುವುದು ಕ್ಯಾಂಪ್ಕೊದ ಗಮನಕ್ಕೆ ಬಂದಿದೆ ಎಂದು ಆಡಳಿತ ನಿರ್ದೇಶಕರು ಹೇಳಿದ್ದಾರೆ. ಮೋಸದ ವ್ಯಾಪಾರದಲ್ಲಿ ಅಡಿಕೆ ಬೆಳೆಗಾರರು ಯಾರೂ ಕೂಡ ಭಾಗಿಯಾಗಬಾರದು. ಅದಕ್ಕಾಗಿ ತಮ್ಮ ಕಾರ್ಡನ್ನು ಯಾರೂ ಕೂಡ ದುರುಪಯೋಗ ಪಡಿಸಲು ಅನುವು ಮಾಡಿಕೊಡಬಾರದು ಎಂದು ಆಡಳಿತ ನಿರ್ದೇಶಕರು ಎಚ್ಚರಿಸಿದ್ದಾರೆ.

# ಮಂಗಳೂರಿನ ಗಾಳಿಯ ಗುಣಮಟ್ಟದಲ್ಲಿ ಕುಸಿತ




ಮಂಗಳೂರು: ಸಮುದ್ರ, ಪಶ್ಚಿಮ ಘಟ್ಟಗಳ ಶ್ರೇಣಿಯಿಂದ ಸುತ್ತುವರಿದಿರುವ ಮಂಗಳೂರಿನಲ್ಲಿ ಜನರು ಉಸಿರಾಡುವ ಗಾಳಿಯ ಗುಣಮಟ್ಟ ತೀವ್ರವಾಗಿ ಕುಸಿದಿದೆ ಎಂದು ಗ್ರೀನ್ ಪೀಸ್ ಸಂಶೋಧನಾ ಎಚ್ಚರಿಕೆ ನೀಡಿದೆ. ಪರಿಸರ ಪರ ಅಭಿಯಾನಗಳನ್ನು ಹಮ್ಮಿಕೊಳ್ಳುವ ಗ್ರೀನ್ ಪೀಸ್ ಇಂಡಿಯಾ ಸ್ವತಂತ್ರ ಸಂಸ್ಥೆಯಾಗಿದ್ದು, ಹವಾಮಾನ ಬದಲಾವಣೆಗೆ ಸಂಬಂಧಿಸಿದಂತೆ ಏರುತ್ತಿರುವ ಭೂಮಿಯ ತಾಪವನ್ನು ತಗ್ಗಿಸುವಿಕೆ, ಈ ಸಂಬಂಧ ಹೊಸ ಮಾರ್ಗೋ ಪಾಯಗಳ ಅಳವಡಿಸಿಕೊಳ್ಳುವಿಕೆ ಮತ್ತು ಈ ನಿಟ್ಟಿನಲ್ಲಿ ಅಗತ್ಯವಿರುವ ಮಾರ್ಪಾಡುಗಳಿಗೆ ಉತ್ತೇಜನ ನೀಡಲು ನಿಟ್ಟಿನಲ್ಲಿ ಕಾರ್ಯಾಚರಿಸುತ್ತಿದೆ. ಮಂಗಳೂರು ಮಾತ್ರವಲ್ಲದೆ, ಕರ್ನಾಟಕದ ಬೆಂಗಳೂರು ಹಾಗೂ ಮೈಸೂರು ಜಿಲ್ಲೆಯಲ್ಲಿಯೂ ನಾವು ಉಸಿರಾಡುವ ಗಾಳಿಯ ಗುಣಮಟ್ಟ ತೀವ್ರವಾಗಿ ಕುಸಿದಿದ್ದು, ಮಾಲಿನ್ಯದ ಪ್ರಮಾಣ ಅಪಾಯಕಾರಿ ಮಟ್ಟಕ್ಕೆ ತಲುಪಿರುವುದಾಗಿ ತನ್ನ ಸಂಶೋಧನಾ ವರದಿಯಲ್ಲಿ ತಿಳಿಸಿದೆ.

# ಬಫರ್ ಝೋನ್‌ನಲ್ಲಿ ಹೋಂಸ್ಟೇ: ನೋಟಿಸ್


ಬೆಳ್ತಂಗಡಿ: ತಾಲೂಕಿನಲ್ಲಿ ಕುದುರೇಮುಖ ರಾಷ್ಟ್ರೀಯ ಉದ್ಯಾನವನದೊಳಗೆ ಹಾಗೂ ಉದ್ಯಾನವನದ ಬಫರ್ ಝೋನ್ ಎಂದು ಗುರುತಿಸಲಾಗಿರುವ ಪರಿಸರ ಸೂಕ್ಷ್ಮ ಪ್ರದೇಶದಲ್ಲಿರುವ 54 ಹೋಂ ಸ್ಟೇಗಳಿಗೆ ಅರಣ್ಯ ಇಲಾಖೆಯ ವನ್ಯಜೀವಿ ವಿಭಾಗದವರು ನೋಟಿಸ್ ನೀಡಿ ದಾಖಲೆಗಳನ್ನು ಹಾಜರುಪಡಿಸುವಂತೆ ಸೂಚಿಸಿದೆ. ಕುದುರೇಮುಖ ರಾಷ್ಟ್ರೀಯ ಉದ್ಯಾನವನದ ಸುತ್ತಲೂ ಯಾವುದೇ ಪರವಾನಿಗೆಯಿಲ್ಲದೆ ಅನಧಿಕೃತವಾಗಿ ಹೋಂ ಸ್ಟೇಗಳು ಕಾರ್ಯ ನಿರ್ವಹಿಸುತ್ತಿರುವ ಮಾಹಿತಿಯ ಹಿನ್ನೆಲೆಯಲ್ಲಿ ನೋಟಿಸ್ ನೀಡಿ ದಾಖಲೆಗಳನ್ನು ಹಾಜರುಪಡಿಸುವಂತೆ ಸೂಚಿಸಿರುವುದಾಗಿ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. 2020 ರಲ್ಲಿ ಕುದುರೇಮುಖ ರಾಷ್ಟ್ರೀಯ ಉದ್ಯಾನವನದ ಬಫರ್ ಝೋನ್ ಬಗ್ಗೆ ಅಂತಿಮ ನೋಟಿಫಿಕೇಶನ್ ಆಗಿದ್ದು ಬಫರ್ ಝೋನ್ ಅನ್ನು ಪರಿಸರ ಸೂಕ್ಷ್ಮ ಪ್ರದೇಶ ಎಂದು ಘೋಷಿಸಲಾಗಿದೆ. ಉದ್ಯಾನವನದ ಸುತ್ತಲೂ ಇರುವ ಅನಧಿಕೃತ ಹೋಂಸ್ಟೇಗಳನ್ನು ಉಪಯೋಗಿಸಿ ಉದ್ಯಾನವನದೊಳಗೆ ಅನಧಿಕೃತವಾಗಿ ಟ್ರಕ್ಕಿಂಗ್ ನಡೆಯುತ್ತಿದೆ ಹಾಗೂ ಜಲಪಾತಗಳಿಗೆ ತೆರಳುತ್ತಿದ್ದಾರೆ. ಈ ಬಗ್ಗೆ ಈ ಹಿಂದೆಯೂ ಹಲವಾರು ದೂರುಗಳು ಸಾರ್ವಜನಿಕರಿಂದ ಕೇಳಿ ಬಂದಿತ್ತು.

# ಕುಸಿಯುವ ಭೀತಿಯಲ್ಲಿ ಕೊಡಕ್ಕಲ್ ಗುಡ್ಡ !



ಮಂಗಳೂರು: ನಗರದ ರಾಷ್ಟ್ರೀಯ ಹೆದ್ದಾರಿ 75ರಲ್ಲಿ ಪಡೀಲ್‌ನ ಸಮೀಪದ ಗುಡ್ಡ ಕುಸಿಯುವ ಭೀತಿ ಕಂಡು ಬಂದಿದ್ದು, ಗುಡ್ಡದ ಪಕ್ಕದ ನಿವಾಸಿಗಳು ಆತಂಕಗೊಂಡಿದ್ದಾರೆ. ಪಡೀಲ್‌ನ ಕೊಡಕ್ಕಲ್ ಎಂಬಲ್ಲಿ ಗುಡ್ಡದ ಮೇಲೆ ಸುಮಾರು 40 ಕ್ಕೂ ಹೆಚ್ಚು ಕುಟುಂಬಗಳು ವಾಸವಾಗಿದ್ದಾರೆ. ಗುಡ್ಡದ ಬುಡದಲ್ಲೇ ಅಂಗಡಿ ಮಳಿಗೆಗಳು ಹಾಗೂ ಮನೆಗಳಿದ್ದು, ಅಪಾಯದ ಭೀತಿಯಲ್ಲಿದೆ. ಈಗಾಗಲೇ ಗುಡ್ಡ ಸ್ವಲ್ಪ ಕುಸಿಯುವ ಮೂಲಕ ಮುನ್ನೆಚ್ಚರಿಕೆ ನೀಡಿದಂತಿದೆ. ಒಮ್ಮೆ ಇಲ್ಲಿ ಗುಡ್ಡ ಕುಸಿತ ಉಂಟಾದರೆ ಭಾರಿ ಪ್ರಮಾಣದ ಅನಾಹುತ ಉಂಟಾಗುವ ಸಾಧ್ಯತೆ ಇದೆ. ಮಳೆ ಇನ್ನೂ ದೂರವಾಗಿಲ್ಲದ ಕಾರಣ ಗುಡ್ಡ ಕುಸಿತದ ಆತಂಕ ಕೂಡಾ ದೂರವಾಗಿಲ್ಲ. ಗುಡ್ಡದ ಕೆಳ ಪ್ರದೇಶದ ಜಮೀನು ಹೆದ್ದಾರಿಗೆ ಹೊಂದಿಕೊಂಡಿರುವ ಜಮೀನು ಮಾಲಕರು ಬಹಳಷ್ಟು ವರ್ಷದ ಹಿಂದೆಯೇ ಗುಡ್ಡ ಅಗೆತ ಮಾಡಿದ್ದರು ಎನ್ನಲಾಗಿದೆ. ಆದರೆ ಆ ವೇಳೆಯೇ ಸರಿಯಾದ ರೀತಿಯಲ್ಲಿ ಗುಡ್ಡವನ್ನು ಸರಿಯಾಗಿ ಕಟ್ ಮಾಡದೆ 85 ಡಿಗ್ರಿಯಲ್ಲಿ ಮಣ್ಣು ತೆಗೆದಿರುವುದೇ ಸದ್ಯದ ಗುಡ್ಡ ಕುಸಿಯುವ ಆತಂಕಕ್ಕೆ ಕಾರಣವಾಗಿದೆ ಎಂದು ಸ್ಥಳೀಯರು ಹೇಳುತ್ತಿದ್ದಾರೆ.

# ಅಡ್ಡೂರು ಸೇತುವೆ ನಿರ್ಬಂಧ : ಪರಿಶೀಲಿಸಲು ಸೂಚನೆ



ಮಂಗಳೂರು: ಬಂಟ್ವಾಳ ಹಾಗೂ ಮಂಗಳೂರು ತಾಲೂಕಿನ ರಾಜ್ಯ ಹೆದ್ದಾರಿ ಸಂಪರ್ಕಕ್ಕೆ ಕೊಂಡಿಯಾಗಿರುವ ಫಲ್ಗುಣಿ ನದಿಯ ಪೊಳಲಿ ಸೇತುವೆಯಲ್ಲಿ ಲಾರಿ ಮತ್ತು ಬಸ್ಸುಗಳಿಗೆ ಹಾಕಿರುವ ನಿರ್ಬಂಧವನ್ನು ತೆರವುಗೊಳಿಸುವ ಬಗ್ಗೆ ಪರಿಶೀಲಿಸಲು ದ.ಕ. ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ದ.ಕ. ಜಿಲ್ಲಾಧಿಕಾರಿಗಳಿಗೆ ಸೂಚಿಸಿದ್ದಾರೆ. ಸೇತುವೆಯಲ್ಲಿ ನಿರ್ಬಂಧದಿಂದ ಸಾರ್ವಜನಿಕರಿಗೆ ಸಮಸ್ಯೆಯಾಗಿರುವ ಬಗ್ಗೆ ಅಹವಾಲುಗಳು ಬಂದ ಹಿನ್ನಲೆಯಲ್ಲಿ ಪಾಣೆ ಮಂಗಳೂರು ಬ್ಲಾಕ್ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಬಿ.ಚಂದ್ರಶೇಖರ ಭಂಡಾರಿ ಸಚಿವರಿಗೆ ಮನವಿ ಸಲ್ಲಿಸಿದ್ದರು. ಇದಕ್ಕೆ ಸ್ಪಂದಿಸಿರುವ ಸಚಿವರು ಈ ಬಗ್ಗೆ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದ್ದು, ಅಡ್ಡೂರು ಸೇತುವೆ ನಿರ್ಬಂಧ ತೆರವು ಬಗ್ಗೆ ಪರಿಶೀಲಿಸಿ ಶೀಘ್ರವೇ ಸೂಕ್ತ ಕ್ರಮಕೈಗೊಳ್ಳಲು ಸೂಚಿಸಿದ್ದಾರೆ.




## ಕೋಸ್ಟಲ್‌ವುಡ್ ಕಲಾವಿದರ ಸ್ಯಾಂಡಲ್‌ವುಡ್ ಸಿನಿಮಾ!



ಈಗಾಗಲೇ ಅನೇಕ ಮಂದಿ ಕರಾವಳಿ ಸೀಮೆಯಿಂದ ಕನ್ನಡ ಚಿತ್ರರಂಗ ಪ್ರವೇಶಿಸಿ ಅದೃಷ್ಟ ಪರೀಕ್ಷೆ ಮಾಡಿದ್ದಾರೆ. ಗೆಲುವನ್ನೂ ದಾಖಲಿಸಿದ್ದಾರೆ. ಇದೀಗ 'ಕಲ್ಜಿಗ' ಎಂಬ ಚಿತ್ರದ ಮೂಲಕ ಮತ್ತೊಂದು ತಂಡ ಕನ್ನಡ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿದೆ. ಸಿನಿಮಾ ಕುರಿತು ಚಿತ್ರತಂಡ ಪತ್ರಿಕಾಗೋಷ್ಠಿ ನಡೆಸಿ ಮಾಹಿತಿಯನ್ನು ಹಂಚಿಕೊಂಡಿತು. ನಿರ್ದೇಶಕ ಸುಮನ್ ಸುವರ್ಣ ಮಾತನಾಡಿ, ಹಿಮಾನಿ ಫಿಲಂಸ್ ಬ್ಯಾನರಿನಡಿಯುಲ್ಲಿ ನಿರ್ಮಾಣಗೊಂಡಿರುವ ಕಲ್ಜಿಗ ಚಿತ್ರವನ್ನು ಶರತ್‌ಕುಮಾರ್ ಎ.ಕೆ. ನಿರ್ಮಾಣ ಮಾಡಿದ್ದಾರೆ. ಬಹುಕಾಲದ ನಂತರ ನಾದಬ್ರಹ್ಮ ಹಂಸಲೇಖ ಈ ಸಿನಿಮಾ ಮೂಲಕ ಸಂಗೀತ ನಿರ್ದೇಶನಕ್ಕೆ ಮರಳಿದ್ದಾರೆ. ಒಳ್ಳೆಯ ಕನ್ನಡ ಸಿನಿಮಾವನ್ನು ಪ್ರೇಕ್ಷಕರು ಮೆಚ್ಚಿಕೊಳ್ಳುತ್ತಾರೆ ಎಂಬ ವಿಶ್ವಾಸವಿದೆ. ಎಲ್ಲರೂ ನಮ್ಮ ಸಿನಿಮಾ ನೋಡಿ ಹಾರೈಸಿ ಎಂದರು.

## ಭಕ್ತಿ ಪ್ರಧಾನ ತಾರಕೇಶ್ವರ ಹಾಡುಗಳ ಬಿಡುಗಡೆ..



ಭಕ್ತಿ ಪ್ರಧಾನ "ತಾರಕೇಶ್ವರ" ಚಿತ್ರದ ಶೀರ್ಷಿಕೆ ಅನವರಣ ಸಮಾರಂಭವು ಎಸ್‌ಆರ್‌ವಿ ಚಿತ್ರಮಂದಿರ ದಲ್ಲಿ ಅದ್ದೂರಿಯಾಗಿ ನಡೆಯಿತು. ಮಾಜಿ ಉಪಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವಥ್ ನಾರಾಯಣ್ ಸಂಸ್ಥೆಯ ನಾಮಫಲಕವನ್ನು ಬಿಡುಗಡೆ ಮಾಡಿ ತಂಡಕ್ಕೆ ಶುಭ ಹಾರೈಸಿ ದರು. ಇದರ ಬೆನ್ನಲ್ಲೆ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಎನ್.ಎಂ.ಸುರೇ ಶ್ ಶೀರ್ಷಿಕೆ ಅನಾವರಣಗೊಳಿಸಿದರೆ, ಸಿರಿ ಮ್ಯೂಸಿಕ್ ಸಂಸ್ಥೆಯು ಹೊರ ತಂದಿರುವ ಹಾಡುಗಳ ಪೈಕಿ, ಹಿರಿಯ ನಿರ್ದೇಶಕ ಸಾ ಯಿ ಪ್ರಕಾಶ್‌ಟೈಟಲ್ ಸಾಂಗ್‌ಗೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಕರ್ನಾಟಕ ಚಲನಚಿತ್ರ ನಿರ್ದೇಶಕರ ಸಂಘದ ಅಧ್ಯಕ್ಷ ಎನ್ನಾರ್ ಕೆ ವಿಶ್ವನಾಥ್, ಕರ್ನಾಟಕ ಟೆಲಿವಿಷನ್ ಸಂಘದ ಅಧ್ಯಕ್ಷ ರವಿ.ಆರ್.ಗರಣಿ, ಮುಂತಾದ ಗಣ್ಯರುಗಳು ಉಪಸ್ಥಿತರಿದ್ದರು.

## ರಥಾವರ ನಿರ್ದೇಶಕ 'ಚೌಕಿದಾರ್'!



ಚೌಕಿದಾರ್ ಸಿನಿಮಾ ತನ್ನ ಕ್ಯಾಚಿ ಟೈಟಲ್ ನಿಂದಲೇ ಗಾಂಧಿ ನಗರದ ಸಿನಿಮಾ ಪ್ರೇಮಿಗಳಲ್ಲಿ ನಿರೀಕ್ಷೆ ಹೆಚ್ಚಿಸಿದೆ. 'ರಥಾವರ' ಸಿನಿಮಾ ನಿರ್ದೇಶಿಸಿದ್ದ ಚಂದ್ರಶೇಖರ್ ಬಂಡಿಯಪ್ಪ ಸಾರಥ್ಯದ ಈ ಚಿತ್ರದ ಅಂಗಳದಿಂದ ಹೊಸ ಅಪ್‌ಡೇಟ್ ಸಿಕ್ಕಿದೆ. ಬಂಡೆ ಮಹಾಕಾಳಿ ಆಶೀರ್ವಾದ ಪಡೆದು ಶೂಟಿಂಗ್ ಅಖಾಡಕ್ಕೆ ಇಳಿದಿದ್ದ ಚಿತ್ರತಂಡವೀಗ 53 ದಿನಗಳ ಕಾಲ ಚಿತ್ರೀಕರಣ ಮುಗಿಸಿದೆ. ನೈಸರ್ಗಿಕ ಸೌಂದರ್ಯಕ್ಕೆ ಖ್ಯಾತಿ ಪಡೆದಿರುವ ಅಂಡಮಾನ್-ನಿಕೋಬಾರ್ ದ್ವೀಪದಲ್ಲಿ ಚೌಕಿದಾರ್ ಸಿನಿಮಾವನ್ನು 10 ದಿನಗಳ ಕಾಲ ಚಿತ್ರೀಕರಣ ನಡೆಸಲಾಗಿದೆ. ಪ್ಯಾನ್ ಇಂಡಿಯಾ ಮಟ್ಟದಲ್ಲಿ ತಯಾರಾಗುತ್ತಿರುವ ಚೌಕಿದಾರ್ ಸಿನಿಮಾವನ್ನು ಅಷ್ಟೇ ಅದ್ದೂರಿಯಾಗಿ ಹಾಗೂ ಸೊಗಸಾಗಿ ನಿರ್ಮಿಸಲಾಗುತ್ತಿದೆ. ಅದರಂತೆ ಚಿತ್ರತಂಡ ಅಂಡಮಾನ್-ನಿಕೋಬರ್ ದ್ವೀಪದಲ್ಲಿ ಚಿತ್ರೀಕರಣ ನಡೆಸಿದೆ. ಶಿವಣ್ಣ ನಟನೆಯ ಅಂಡಮಾನ್ ಸಿನಿಮಾದ ಶೂಟಿಂಗ್ ಈ ಜಾಗದಲ್ಲಿ ನಡೆದಿತ್ತು.

## 'ಕಂಕನಾಡಿ' ಸಿನಿಮಾ ಮುಹೂರ್ತ

ಎಚ್‌ಪಿಆರ್ ಫಿಲ್ಮ್ಸ್, ಪುಳಿಮುಂಚಿ ಚಿತ್ರತಂಡದ, ಹರಿಪ್ರಸಾದ್‌ರೈ ನಿರ್ಮಾಣದ, ತ್ರಿಶೂಲ್ ಶೆಟ್ಟಿ ನಿರ್ದೇಶನದ "ಕಂಕನಾಡಿ" ತುಳು ಚಲನಚಿತ್ರದ ಚಿತ್ರೀಕರಣದ ಮೂಹೂರ್ತ ಕಾರ್ಯಕ್ರಮ ಮಂಗಳೂರಿನ ಉರ್ವ ಶ್ರೀ ಮಾರಿಯಮ್ಮ ದೇವಸ್ಥಾನದಲ್ಲಿ ನೆರವೇರಿತು. ಶಾಸಕ ಐವನ್ ಡಿ ಸೋಜಾ ಕ್ಲ್ಯಾಪ್ ಮಾಡಿದರು. ಪ್ರಕಾಶ್ ಪಾಂಡೇಶ್ವರ್ ಕ್ಯಾಮರ ಚಾಲನೆ ನೀಡಿದರು. ಡಿಸೋಜಾ ಮಾತನಾಡಿ, ಜಿಲ್ಲೆಯಲ್ಲಿ ಬಹಳಷ್ಟು ಪ್ರತಿಭಾವಂತ ಕಲಾವಿದರಿದ್ದಾರೆ. ಕಲಾವಿದರಿಗೆ ಅವಕಾಶ ದೊರೆತು ಅವರು ಸಮಾಜದ ಎದುರು ಬರುವಂತಾಗಲಿ ಎಂದರು. ತುಳು ಅಕಾಡೆಮಿ ಅಧ್ಯಕ್ಷ ತಾರನಾಥ್‌ಗಟ್ಟಿ ಕಾಪಿಕಾಡ್ ಮಾತನಾಡಿ, "ತುಳು ಭಾಷೆ ವಿಶ್ವದ ಎಲ್ಲೆಡೆ ಪಸ ರಿಸಿದೆ. ಇವತ್ತು ಭಾಷೆ ಉಳಿಯುವಲ್ಲಿ ತುಳು ನಾಟಕ, ತುಳು ಸಿನಿಮಾದ ಕೊಡುಗೆ ದೊಡ್ಡದಿದೆ. ತುಳು ಭಾಷೆಯ ರಾಯಭಾರಿಯಾಗಿ ನಾಟಕ ಸಿನಿಮಾಗಳು ಕೆಲಸ ಮಾಡುತ್ತಿದೆ ಎಂದರು.



## ಮಧುಚಂದ್ರರಿಂದ ನೂತನ ಪ್ರಚಾರಕ್ಕೆ ನಾಂದಿ..

"ಸೆಲ್ಫಿ ಮಮ್ಮಿ ಗೂಗಲ್‌ಡ್ಯಾಡಿ" ಚಿತ್ರದ ನಿರ್ದೇಶಕ ಮಧುಚಂದ್ರ ತಮ್ಮ ಚಿತ್ರಗಳಲ್ಲಿ ಸಮಾಜಕ್ಕೆ ಒಂದೊಳ್ಳೆ ಸಂದೇಶ ನೀಡುತ್ತಾ ಬಂದಿದ್ದಾರೆ. ಪ್ರಸ್ತುತ ಮಧುಚಂದ್ರ ಅವರು "ಮಿ.ರಾಣಿ" ಎಂಬ ವಿಭಿನ್ನ ಕಾಮಿಡಿ ಜಾನರ್‌ನ ಚಿತ್ರ ನಿರ್ದೇಶಿಸಿದ್ದಾರೆ ."ಲಕ್ಷ್ಮೀ ನಿವಾಸ" ಧಾರಾವಾಹಿಯಲ್ಲಿ ಜಯಂತ ಪಾತ್ರದ ಮೂಲಕ ಜನಮನ ಗೆದ್ದಿರುವ ದೀಪಕ್ ಸುಬ್ರಹ್ಮಣ್ಯ ಈ ಚಿತ್ರದ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಪ್ರಸ್ತುತ ಚಿತ್ರೀಕರಣ ಮುಗಿಸಿರುವ ಚಿತ್ರತಂಡ ಈಗ ಪ್ರಚಾರ ಕಾರ್ಯದಲ್ಲಿ ಭಾಗಿಯಾಗಿದೆ. ಪ್ರಚಾರದ ಮೊದಲ ಹೆಜ್ಜೆಯಾಗಿ ಧಾರಾವಾಹಿ ಮೂಲಕ ಜನಪ್ರಿಯರಾಗಿರುವ ನಟ ದೀಪಕ್ ಸುಬ್ರಹ್ಮಣ್ಯ ಅವರ 108 ಜನ ಅಭಿಮಾನಿಗಳ ಮನೆಗೆ "ಮಿ.ರಾಣಿ" ಚಿತ್ರ ತಂಡ ಭೇಟಿ ನೀಡಿ ಅವರ ಮನೆಯಲ್ಲಿ ಪ್ರತಿಷ್ಠಾಪಿಸಲ್ಪಟ್ಟ ಗಣೇಶನ ದರ್ಶನ ಪಡೆದು, ಅವರ ಮೂಲಕ ಚಿತ್ರದ ಪೋಸ್ಟರ್ ಬಿಡುಗಡೆ ಮಾಡಿಸಿದ್ದಾರೆ.



ಹಾಸನ (2ಆಟ) ಪಿಕ್ಚರ್ ಪ್ಯಾಲೇಸ್
ಉಡುಪಿ (4ಆಟ) ಕಲ್ಪನಾ
ಸುರತ್ಕಲ್ (4ಆಟ) ನಟರಾಜ
ಕಾರ್ಕಳ (4ಆಟ) ರಾಧಿಕಾ
ಶನಿವಾರಸಂತೆ (4ಆಟ) ಯಶಸ್ವಿನಿ
ಬೈಂದೂರು (4ಆಟ) ಶಂಕರ್
ಶಿರಾಳಿ (4ಆಟ) ವೆಂಕಟೇಶ್ವರ
ಕಾರ್ಕಳ (4ಆಟ) ಪ್ಲಾನೆಟ್










Edited,Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ Digantha Mudrana Limited, Yeyyadi, Mangaluru 575008 email: karavalitharangini@gmail.com PH: +91 9880109212